ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ವೇತನ ಬಟವಾಡೆ ಆಗದಿರುವ ಕುರಿತು

ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

428 (563) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪದವಿ ಕಾಲೇಜುಗಳ ಪ್ರಾಧ್ಯಾಪಕರಿಂದ ಹಿಡಿದು ಇತರೆ ಎಲ್ಲಾ ನೌಕರರ ವರ್ಗದವರಿಗೆ ಕಳೆದ ಒಂದು ವರ್ಷದಿಂದ ತಿಂಗಳಿಗೆ ಸರಿಯಾಗಿ ವೇತನ ಬಟವಾಡೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇದಕ್ಕೆ ಕಾರಣಗಳೇನು ;

(ಆ) ಪ್ರತಿ ತಿಂಗಳು 5ನೇ ತಾರೀಖಿನ ಒಳಗೆ ವೇತನ ಬಟವಾಡೆÀ ಮಾಡಲು ಇರುವ ತೊಂದರೆ ಏನು;

(ಇ) ಈ ತೊಂದರೆ ನಿವಾರಣೆಗೆ ಶಾಶ್ವತ ಪರಿಹಾರವೇನು ?